ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಕೃಷ್ಣಾ ಮೇಲ್ದಂಡೆ ಯೋಜನೆಯ ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಕೇಂದ್ರಗಳ ಬಗ್ಗೆ

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-

751 (885) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೃಷ್ಣಾ ಮೇಲ್ದಂಡೆ ಯೋಜನೆಯ ಅನುಷ್ಠಾನಕ್ಕಾಗಿ ಹೊಸದಾಗಿ ನಿರ್ಮಿಸುತ್ತಿರುವ 20 ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಕೇಂದ್ರಗಳಿಗಾಗಿ ಎಷ್ಟು ಎಕರೆ ಜಮೀನುಗಳನ್ನು ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆ; ಅವುಗಳು ಯಾವ ಹಂತದಲ್ಲಿವೆ ;

(ಆ) ಉಳಿದ ಗ್ರಾಮಗಳಿಗೆ ಯಾವ ಕಾಲಮಿತಿಯಲ್ಲಿ ಭೂಸ್ವಾಧೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು;

(ಇ) ಯಾವ ಯಾವ ಗ್ರಾಮಗಳು ಸದರಿ ಭೂ-ಸ್ವಾಧೀನ ವ್ಯಾಪ್ತಿಯಲ್ಲಿವೆ; (ಗ್ರಾಮವಾರು, ಸಂಪೂರ್ಣ ವಿವರ ನೀಡುವುದು)

(ಈ) ಭೂ-ಸ್ವಾಧೀನ ಪಡಿಸಿಕೊಂಡ ಜಮೀನುಗಳಿಗೆ ಪರಿಹಾರ ಒದಗಿಸಲಾಗಿದೆಯೇ; ಇಲ್ಲವಾದಲ್ಲಿ, ಯಾವ ಕಾಲಮಿತಿಯಲ್ಲಿ ಸಂತ್ರಸ್ಥರಿಗೆ ಪರಿಹಾರ ನೀಡಲಾಗುವುದು;

(ಉ) ಭೂಸ್ವಾಧೀನ ಪಡಿಸಿಕೊಂಡ ಪುನರ್ ವಸತಿ ಕೇಂದ್ರಗಳಲ್ಲಿ ಅಭಿವೃದ್ಧಿ ಕಾರ್ಯಗಳು ಪ್ರಾರಂಭವಾಗಿದೆಯೇ; ಹಾಗಿದ್ದಲ್ಲಿ, ಅವುಗಳು ಯಾವ ಹಂತದಲ್ಲಿವೆ ? (ಪುನರ್ ವಸತಿ ಕೇಂದ್ರವಾರು ಅವುಗಳ ಸಂಪೂರ್ಣ ವಿವರ ನೀಡುವುದು)